ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಉನಿ : ಸುಮಪ : 2018–19 : ದಿನಾಂಕ : 16–10–2018

# ಪತ್ರಿಕಾ ಪ್ರಕಟಣೆ

1. ಮಹಾರಾಷ್ಟ್ರದ ನಾಗಪುರದಲ್ಲಿರುವ ಡಾ: ಬಿ.ಆರ್. ಅಂಬೇಡ್ಕರ್ ಅವರ ಪುಣ್ಯಭೂಮಿಗೆ ದೀಕ್ಷ ಯಾತ್ರೆ:

ಚಾಲನೆ:
ಡಾ: ಜಿ. ಪರಮೇಶ್ವರ್, ಉಪ ಮುಖ್ಯಮಂತ್ರಿಗಳು

ಅಧ್ಯಕ್ಷತೆ:
ಪ್ರಿಯಾಂಕ್ ಖರ್ಗೆ, ಸಮಾಜ ಕಲ್ಯಾಣ ಸಚಿವರು

ದಿನಾಂಕ: 17–10–2018, ಬುಧವಾರ, ಸಮಯ: ಬೆಳಿಗ್ಗೆ 10–30 ಗಂಟೆಗೆ
ಸ್ಥಳ: ವಿಧಾನ ಸೌಧದ ಮುಂಭಾಗದಲ್ಲಿರುವ ಸಂವಿಧಾನ ಶಿಲ್ಪಿ ಡಾ: ಬಿ.ಆರ್. ಅಂಬೇಡ್ಕರ್ ಅವರ ಪ್ರತಿಮೆಯ ಬಳಿ.

2. 32 ನೇ ಕಬ್ಬಿನ ದ್ವೈವಾರ್ಷಿಕ ಕಾರ್ಯಾಗಾರ:

ಉದ್ಘಾಟನೆ:
ಡಾ: ಎ.ಕೆ. ಸಿಂಗ್, ಉಪ ನಿರ್ದೇಶಕರು, ಭಾರತೀಯ ಅನುಸಂದಾನ ಪರಿಷತ್

ಮುಖ್ಯ ಅತಿಥಿಗಳು:
ಡಾ: ಆರ್.ಕೆ. ಸಿಂಗ್, ಸಹಾಯಕ ಮಹಾನಿರ್ದೇಶಕರು,
ಭಾರತೀಯ ಅನುಸಂದಾನ ಪರಿಷತ್
ಡಾ: ಎ.ಡಿ. ಪಾಥಕ್, ನಿರ್ದೇಶಕರು, ಭಾರತೀಯ ಕಬ್ಬು ಸಂಶೋಧನಾ ಸಂಸ್ಥೆ
ಲಕ್ನೋಡಾ: ಬಕ್ಷೀ ರಾಮ್, ನಿರ್ದೇಶಕರು, ಕಬ್ಬು ತಳಿ ಅಭಿವೃದ್ಧಿ ಸಂಸ್ಥೆ,
ಕೊಯಮತ್ತೂರು

**ಅಧ್ಯಕ್ಷತೆ:**
**ಡಾ: ಎಸ್. ರಾಜೇಂದ್ರಪ್ರಸಾದ್, ಕುಲಪತಿಗಳು, ಕೃಷಿ ವಿಶ್ವವಿದ್ಯಾನಿಲಯ**

**ದಿನಾಂಕ: 17–10–2018, ಬುಧವಾರ, ಸಮಯ: ಬೆಳಿಗ್ಗೆ 10–00 ಗಂಟೆಗೆ**
**ಸ್ಥಳ: ನಾರ್ತ್‌ಬ್ಲಾಕ್ ಸಭಾಂಗಣ, ಗಾಂಧೀ ಕೃಷಿ ವಿಜ್ಞಾನ ಕೇಂದ್ರ (ಜಿ.ಕೆ.ವಿ.ಕೆ), ಹೆಬ್ಬಾಳ, ಬೆಂಗಳೂರು**
**ಸಂಪರ್ಕ: ಡಾ: ಕೆ. ಶಿವರಾಮು, ಹಿರಿಯ ವಾರ್ತಾ ತಜ್ಞರು, 99720035456, 8277810930**

# ಪತ್ರಿಕಾ ಪ್ರಕಟಣೆ

**ಸಂಖ್ಯೆ:1167/1267**

## ಅನಾವರಣಕ್ಕೆ ಸಿದ್ಧಗೊಂಡಿದೆ ಏಕತೆಯ ಪ್ರತಿಮೆ

**ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)**

ಸದೃಢ ನಾಯಕತ್ವ ಹಾಗೂ ದಿಟ್ಟ ನಿರ್ಧಾರಗಳಿಂದ 'ಉಕ್ಕಿನ ಮನುಷ್ಯ' ಎಂದೇ ಜನಪ್ರಿಯರಾಗಿದ್ದ ದೇಶದ ಪ್ರಥಮ ಗೃಹ ಸಚಿವ ಸರ್ದಾರ್ ವಲ್ಲಭಭಾಯ್ ಪಟೇಲ್ ಅವರ 182 ಮೀಟರ್ ಎತ್ತರದ ಪ್ರತಿಮೆಗೆ ಕಂಚಿನ ಹಾಳೆಗಳನ್ನು ಜೋಡಿಸುವ ಕಾರ್ಯ ಅಂತಿಮ ಹಂತದಲ್ಲಿದೆ. ವಿಶ್ವದಲ್ಲಿಯೇ ಅತೀ ಎತ್ತರದ ಪ್ರತಿಮೆ ಎಂಬ ಹಿರಿಮೆಗೆ ಪಾತ್ರವಾಗಲಿರುವ ಈ 'ಏಕತೆಯ ಪ್ರತಿಮೆ' ಅ. 31ರಂದು ಸರ್ದಾರ್ ಅವರ ಹುಟ್ಟುಹಬ್ಬದಂದು ಪ್ರಧಾನಿ ಮೋದಿ ಅವರಿಂದ ಅನಾವರಣಗೊಳ್ಳಲಿದೆ.



ಪ್ರಧಾನಿ ಕನಸು ಸಾಕಾರ:

ಪ್ರಧಾನಿ ಮೋದಿ ಅವರ ಕನಸಿನ ಯೋಜನೆ ಇದು. ಗುಜರಾತ್ ಮೂಲದ ಸರ್ದಾರ್ ಅವರ ಬೃಹತ್ ಪ್ರತಿಮೆ ನಿರ್ಮಿಸಬೇಕೆಂಬ ಕನಸಿನೊಂದಿಗೆ ಮೋದಿ 2013ರಲ್ಲಿ ಗುಜರಾತ್ ಮುಖ್ಯಮಂತ್ರಿ ಆಗಿದ್ದ ವೇಳೆ ಯೋಜನೆಗೆ ಶಂಕುಸ್ಥಾಪನೆ ನೆರವೇರಿಸಿದ್ದರು. ಆ ಕನಸೀಗ ಸಾಕಾರಗೊಂಡಿದೆ.

ಎಲ್ಲಿದೆ ಪ್ರತಿಮೆ?

ನರ್ಮದಾ ಜಿಲ್ಲೆಯ ನರ್ಮದಾ ಡ್ಯಾಮ್‌ನಿಂದ 1 ಕಿ.ಮೀ ದೂರದಲ್ಲಿರುವ 'ಸಾಧು ಬೆಟ್' ದ್ವೀಪದಲ್ಲಿ ಯೋಜನಾ ಸ್ಥಳವಿದೆ. ಈ ಪ್ರತಿಮೆ ನಿರ್ಮಾಣದ ಹಿಂದೆ 250 ಎಂಜಿನಿಯರ್‌ಗಳು ಹಾಗೂ 3,400 ಕಾರ್ಮಿಕರ ಸತತ ಪರಿಶ್ರಮದ ಫಲವಿದೆ.

ಎಲ್ ಆ್ಯಂಡ್ ಟಿ ಹೆಗ್ಗಳಿಕೆ

ನ್ಯೂಯಾರ್ಕ್‌ನ ‘ಲಿಬರ್ಟಿ ಆಫ್ ಸ್ಟ್ಯಾಚ್ಯು’ವಿನ ಎತ್ತರದ (93 ಮೀಟರ್) ದಾಖಲೆಯನ್ನು ಅಳಿಸಿಹಾಕಲಿರುವ ‘ಯುನಿಟಿ ಆಫ್ ಸ್ಟ್ಯಾಚ್ಯು’ವಿನ ಯೋಜನಾ ನಿರ್ಮಾಣದ ಹೊಣೆ ವಹಿಸಿಕೊಂಡಿದ್ದು ಎಲ್ ಆ್ಯಂಡ್ ಟಿ ಕಂಪನಿ.

182 ಮೀಟರ್ ಏಕೆ?

ಗುಜರಾತ್‌ನಲ್ಲಿ 182 ವಿಧಾನಸಭೆ ಕ್ಷೇತ್ರಗಳಿದ್ದು, ಇದರ ರೂಪಕವಾಗಿ ಪ್ರತಿಮೆಯ ಎತ್ತರವನ್ನು ಇಷ್ಟಕ್ಕೇ ನಿರ್ದಿಷ್ಟಗೊಳಿಸಲಾಗಿದೆ. ಅಂದಹಾಗೆ, 7 ಕಿ.ಮೀ ದೂರದಿಂದಲೇ ಪ್ರತಿಮೆಯನ್ನುಗುರುತಿಸಬಹುದಾಗಿದೆ.

2,389 ಕೋಟಿ ರೂ.ಯೋಜನೆಗೆ ಖರ್ಚಾದ ಮೊತ್ತ.15,000 ಮುಂದಿನ ದಿನಗಳಲ್ಲಿ ಈ ತಾಣಕ್ಕೆ ಪ್ರತಿದಿನ ಭೇಟಿ ನೀಡುವ ಪ್ರವಾಸಿಗರ ಅಂದಾಜು ಸಂಖ್ಯೆ

19,000 ಚ.ಮೀ.
ಮೊದಲ ಹಂತದ ಯೋಜನಾ ವಿಸ್ತಾರ ಪ್ರದೇಶ.

90,000 ಟನ್
ಬಳಸಿರುವ ಸಿಮೆಂಟ್

25,000 ಟನ್
ಬಳಸಿರುವ ಉಕ್ಕು

ಏನೆಲ್ಲಾ ಇಲ್ಲಿದೆ?

– 52 ಕೊಠಡಿಗಳ ‘ಶ್ರೇಷ್ಠ ಭಾರತ್ ಭವನ್’ ಹೋಟೆಲ್, 250 ಟೆಂಟ್‌ಗಳಿರುವ ‘ಟೆಂಟ್ ಸಿಟಿ’.
– ಸೆಲ್ಫಿ ಪಾಯಿಂಟ್, ರೆಸ್ಟೋರೆಂಟ್‌ಗಳು, ಫೆರ್ರಿ ಸೇವೆ, ಬೋಟಿಂಗ್ ಸೌಕರ್ಯ.
– 306 ಮೀಟರ್ ಉದ್ದದ ಮಾರ್ಬಲ್ ಫ್ಲೋರಿಂಗ್ ವಾಕ್‌ವೇ. ವೀಕ್ಷಣಾ ಗ್ಯಾಲರಿ.
– ಪಟೇಲರಿಗೆ ಸಂಬಂಧಿಸಿದ ಮ್ಯೂಸಿಯಂ. ಆಡಿಯೊ-ವಿಡಿಯೊ ಗ್ಯಾಲರಿ, ಸಂಶೋಧನಾ ಕೇಂದ್ರ.
– ಪ್ರತಿಮೆಗೆ ಲೇಸರ್ ಬೆಳಕಿನ ವ್ಯವಸ್ಥೆ ಹಾಗೂ ಧ್ವನಿ ಪ್ರದರ್ಶನ.




5000 ಕಂಚಿನ ಹಾಳೆಗಳ ಬಳಕೆ

ಪ್ರತಿಮೆ ನಿರ್ಮಾಣಕ್ಕೆ ಕಾಂಕ್ರಿಟ್ ಮತ್ತು ಉಕ್ಕು ಬಳಸಲಾಗಿದ್ದು, ಹೊರ ಮೈಗೆ ಕಂಚು ಪ್ಯಾನೆಲ್‌ಗಳನ್ನು ಉಪಯೋಗಿಸಲಾಗಿದೆ. ಪ್ರತಿಮೆಯ ಉಕ್ಕಿನ ಕೆಲಸವನ್ನು ಮಲೇಷ್ಯಾ ಮೂಲದ ಎವರ್‌ಸೆಂಡಾಯಿ ಕಂಪನಿಗೆ ವಹಿಸಲಾಗಿದೆ. ಜಗತ್ತಿನ ಅತಿ ಎತ್ತರದ ಕಟ್ಟಡ ಎಂದೇ ಖ್ಯಾತಿಯಾಗಿರುವ ದುಬೈನ ಬುರ್ಜ್- ಖಲೀಫಾವನ್ನು ಇದೇ ನಿರ್ಮಿಸಿದೆ. ಹಾಗೆಯೇ ಪ್ರತಿಮೆಯ ಕಂಚಿನ ಕೆಲಸವನ್ನು ಟಿಕ್ಯೂ ಆರ್ಟ್ ಫೌಂಡ್ರಿ ಕೈಗೊಂಡಿದ್ದು, ಒಟ್ಟು 5,000 ಕಂಚು ಪ್ಯಾನೆಲ್‌ಗಳನ್ನು ಬಳಸಿಕೊಳ್ಳಲಾಗಿದೆ. ಇದರ ಮೇಲ್ವಿಚಾರಣೆಯನ್ನು ಕಲಾವಿದ ರಾಮ್ ಸುತಾರ್ ವಹಿಸಿಕೊಂಡಿದ್ದಾರೆ.

ಜಗತ್ತಿನ ಎತ್ತರದ ಪ್ರತಿಮೆಗಳು

ಏಕತಾ ಪ್ರತಿಮೆ, ಗುಜರಾತ, ಭಾರತ- 182 ಮೀ.

ಸ್ಪ್ರಿಂಗ್ ಟೆಂಪಲ್ ಬುದ್ಧ, ಚೀನಾ- 153 ಮೀ.

ಯುಹೈಕು ಡೈಬುಟ್ಸು, ಜಪಾನ್- 120 ಮೀ.

ಸ್ಟ್ಯಾಚು ಆಫ್ ಲೀಬರ್ಟಿ, ಅಮೆರಿಕ- 93 ಮೀ.

ದಿ ಮದರ್‌ಲ್ಯಾಂಡ್ ಕಾಲ್ಸ್, ರಷ್ಯಾ- 85 ಮೀ

ಕ್ರೈಸ್ಟ್ ದಿ ರಿಡೀಮರ್, ಬ್ರೆಜಿಲ್- 39.6 ಮೀ.

**ಸಂಖ್ಯೆ:1167/1267**

**ಸಂಖ್ಯೆ:1168/1268**

## ಕೊಡಗಿನ ಸೈನಿಕ ಶಾಲೆ ಪ್ರವೇಶಕ್ಕೆ ಪರೀಕ್ಷೆ

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)

ಕೊಡಗಿನ ಸೈನಿಕ ಶಾಲೆಯು 6 ಹಾಗೂ 9ನೇ ತರಗತಿ ಪ್ರವೇಶ ಬಯಸುವ ಬಾಲಕರಿಂದ 2019–20 ನೇ ಸಾಲಿನ ಪ್ರವೇಶಕ್ಕೆ ಪ್ರವೇಶ ಪರೀಕ್ಷೆ ನಡೆಸಲಿದೆ.

ಅಖಿಲ ಭಾರತ ಸೈನಿಕ ಶಾಲಾ ಪ್ರವೇಶ ಪರೀಕ್ಷೆಯಡಿ ಈ ಪರೀಕ್ಷೆಯನ್ನು 2019 ರ ಜನವರಿ 6 ರ ಭಾನುವಾರದಂದು ಬೆಂಗಳೂರು, ಬಳ್ಳಾರಿ, ಶಿವಮೊಗ್ಗ ಮತ್ತು ಸೈನಿಕ ಶಾಲೆ, ಕೊಡಗಿನಲ್ಲಿ ನಡೆಸಲಾಗುತ್ತದೆ.

ಪ್ರವೇಶ ಅರ್ಜಿ ನಮೂನೆಯನ್ನು ನವೆಂಬರ್ 28 ರವರೆಗೆ ಶಾಲೆಯ ವೆಬ್‌ಸೈಟ್ www.sainikschoolkodagu.edu.in ಅಥವಾ sainikschooladmission.in ನಲ್ಲಿ ಆನ್‌ಲೈನ್‌ನಲ್ಲಿ ಪಡೆದು ಸಲ್ಲಿಸಬಹುದು.

ಸ್ಪರ್ಧಾತ್ಮಕ ಪರೀಕ್ಷೆ ಮಾದರಿಯಲ್ಲಿ ಈ ಪ್ರವೇಶ ಪರೀಕ್ಷೆ ನಡೆಸಲಾಗುವುದು. ಆಸಕ್ತ ವಿದ್ಯಾರ್ಥಿಗಳು ಅರ್ಜಿ ಸಲ್ಲಿಸಬಹುದೆಂದು ಸೈನಿಕ ಶಾಲೆ, ಕೊಡಗು ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

**ಸಂಖ್ಯೆ:1169/1269**

## ‘ಗಣತಿ ಆಧಾರಿತ ರಾಜ್ಯ ಸಾಧನಾ ಸಮೀಕ್ಷೆ’

ಬೆಂಗಳೂರು, ಅಕ್ಟೋಬರ್ 16, (ಕರ್ನಾಟಕ ವಾರ್ತೆ)

2018-19 ನೇ ಸಾಲಿನಲ್ಲಿ ರಾಜ್ಯದ ಎಲ್ಲಾ ಸರ್ಕಾರಿ ಹಾಗೂ ಅನುದಾನಿತ ಶಾಲೆಗಳ ಎಲ್ಲಾ ಮಾಧ್ಯಮದ 4 ರಿಂದ 10ನೇ ತರಗತಿಯ ವಿದ್ಯಾರ್ಥಿಗಳಿಗೆ ಮತ್ತು ಸ್ವ-ಇಚ್ಛೆಯಿಂದ ಭಾಗವಹಿಸುವ 10ನೇ ತರಗತಿಯ ಅನುದಾನ ರಹಿತ ಶಾಲಾ ವಿದ್ಯಾರ್ಥಿಗಳಿಗೆ ದಿನಾಂಕ: 29-10-2018 ರಿಂದ 30-10-2018 ರಂದು ‘ಗಣತಿ ಆಧಾರಿತ ರಾಜ್ಯ ಸಾಧನ ಸಮೀಕ್ಷೆ’ ಸಂಕಲನಾತ್ಮಕ ಮೌಲ್ಯಮಾಪನ-1 (CSAS-SA-I) ನ್ನು ರಾಜ್ಯಾದ್ಯಂತ ಏಕಕಾಲದಲ್ಲಿ ನಡೆಸಲಾಗುವುದು.

ಮೊದಲನೇ ದಿನ ಭಾಷೆ ಮತ್ತು ಎರಡನೇ ದಿನ ಕೋರ್ ವಿಷಯಗಳಿಗೆ ಸಮೀಕ್ಷೆಯನ್ನು ನಡೆಸಲಾಗುವುದು. 4 ರಿಂದ 10ನೇ ತರಗತಿಯವರೆಗೆ 53926 ಶಾಲೆಗಳಿಂದ ಒಟ್ಟು 40.68 ಲಕ್ಷ ವಿದ್ಯಾರ್ಥಿಗಳಿಗೆ ಈ ಸಮೀಕ್ಷೆಯನ್ನು ನಡೆಸಲಾಗುವುದು ಎಂದು ಪ್ರಕಟಣೆ ತಿಳಿಸಿದೆ.

**ಸಂಖ್ಯೆ:1170/1270**

## ‘ಆರೋಗ್ಯ ಕರ್ನಾಟಕ’ ಯೊಜನೆಯ ವೈಶಿಷ್ಟ್ಯತೆ

- ಕರ್ನಾಟಕ ರಾಜ್ಯದಲ್ಲಿ ವಾಸಿಸುತ್ತಿರುವ ಎಲ್ಲ ಜನರಿಗೆ ಸಾರ್ವತ್ರಿಕ ಆರೋಗ್ಯ ರಕ್ಷಣೆ ಒದಗಿಸಲು ‘ಆರೋಗ್ಯ ಕರ್ನಾಟಕ’ ಎಂಬ ಯೋಜನೆಯನ್ನು ಜಾರಿಗೊಳಿಸಲಾಗಿದೆ. ಆರೋಗ್ಯ ಕರ್ನಾಟಕ ಯೋಜನೆಯು ದಿನಾಂಕ 2/3/2018 ರಂದು ಚಾಲನೆಗೊಂಡಿರುತ್ತದೆ.
- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ರಾಜ್ಯದ ಎಲ್ಲಾ ನಿವಾಸಿಗಳಿಗೆ ಒಂದೇ ಸೂರಿನಡಿಯಲ್ಲಿ ಪ್ರಾಥಮಿಕ ಹಂತದ ಆರೋಗ್ಯ ರಕ್ಷಣೆ, ಸರಳ ದ್ವಿತೀಯ ಹಂತದ ಆರೋಗ್ಯ ರಕ್ಷಣೆ, ಕ್ಲಿಷ್ಟಕರ ದ್ವಿತೀಯ ಹಂತದ ಆರೋಗ್ಯ ರಕ್ಷಣೆ, ತೃತೀಯ ಹಂತದ ಆರೋಗ್ಯ ರಕ್ಷಣೆ ಹಾಗೂ ತುರ್ತು ಚಿಕಿತ್ಸೆಗಳನ್ನು ಒದಗಿಸಲಾಗುತ್ತದೆ.

- ಫಲಾನುಭವಿಗಳನ್ನು ಅರ್ಹತಾ ರೋಗಿಗಳು (ಬಿಪಿಎಲ್ ಪಡಿತರ ಚೀಟಿ ಉಳ್ಳವರು) ಹಾಗೂ ಸಾಮಾನ್ಯ ರೋಗಿಗಳು (ಬಿಪಿಎಲ್ ಪಡಿತರ ಚೀಟಿ ಇಲ್ಲದವರು) ಎಂದು ಎರಡು ವರ್ಗದಲ್ಲಿ ವಿಂಗಡಿಸಲಾಗಿದೆ.
- ಅರ್ಹತಾ ರೋಗಿಗಳಿಗೆ ಬಹುತೇಕ ಉಚಿತ ಚಿಕಿತ್ಸೆ
- ಸಾಮಾನ್ಯ ರೋಗಿಗಳಿಗೆ ಸರ್ಕಾರವು ಪ್ಯಾಕೇಜ್ ಮೊತ್ತದ ಶೇ 30% ರಷ್ಟು ವೆಚ್ಚವನ್ನು ಭರಿಸುತ್ತದೆ.
- ಅರ್ಹತಾ ರೋಗಿಗಳು ಬಿ.ಪಿ.ಎಲ್ ಪಡಿತರ ಚೀಟಿ ಮತ್ತು ಆಧಾರ್ ಕಾರ್ಡ್ ಆಧಾರದ ಮೇಲೆ ಚಿಕಿತ್ಸೆ ಪಡೆಯಬಹುದು. ಸಾಮಾನ್ಯ ರೋಗಿಗಳು ಆಧಾರ್ ಕಾರ್ಡ್ ಮತ್ತು ಎ.ಪಿ.ಎಲ್ ಪಡಿತರ ಕಾರ್ಡ್ ಆಧಾರದ ಮೇಲೆ ಚಿಕಿತ್ಸೆ ಪಡೆಯಬಹುದು

**ನಕಲು ಹಾಗೂ ದುರುಪಯೋಗ ತಡೆಯಲು ಯೋಜನೆಗಳ ವಿಲೀನ**

- ಈ ಹಿಂದೆ ವಿವಿಧ ವರ್ಗಗಳ ಫಲಾನುಭವಿಗಳಿಗೆ ಬೇರೆ ಬೇರೆ ಹೆಸರಿನ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗುತ್ತಿತ್ತು. ಬಿಪಿಎಲ್ ಕುಟುಂಬಗಳಿಗೆ ವಾಜಪೇಯಿ ಆರೋಗ್ಯಶ್ರೀ, ಎಪಿಎಲ್ ಕುಟುಂಬಗಳಿಗೆ ರಾಜೀವ್ ಆರೋಗ್ಯ ಭಾಗ್ಯ, ಅಸಂಘಟಿತ ಕಾರ್ಮಿಕರಿಗೆ ರಾಷ್ಟ್ರೀಯ ಸ್ವಾಸ್ಥ್ಯ ಬಿಮಾ ಯೋಜನೆ, ಆತ್ಮಾಹುತಿಗೆ ಒಳಗಾದ ರೈತ ಕುಟುಂಬಗಳಿಗೆ ಇಂದಿರಾ ಸುರಕ್ಷಾ ಯೋಜನೆ, ರಸ್ತೆ ಅಪಘಾತದ ಗಾಯಾಳುಗಳಿಗೆ ಮುಖ್ಯಮಂತ್ರಿ ಸಾಂತ್ವನ ಹರೀಶ್ ಯೋಜನೆ – ಹೀಗೆ ವಿವಿಧ ವರ್ಗಗಳ ಜನರಿಗೆ ವಿವಿಧ ಯೋಜನೆಗಳು ಜಾರಿಯಲ್ಲಿದ್ದವು. ಇದರಿಂದಾಗಿ ಒಬ್ಬನೇ ವ್ಯಕ್ತಿ ಒಂದಕ್ಕಿಂತ ಹೆಚ್ಚು ಯೋಜನೆಗಳ ಅಡಿಯಲ್ಲಿ ಫಲಾನುಭವಿ ಆಗಿರುವ ಸಂಭವಗಳು ಇರುತ್ತಿತ್ತು. ಇಂತಹ ಸಂದರ್ಭದಲ್ಲಿ ಒಂದೇ ಚಿಕಿತ್ಸೆಗೆ ಬೇರೆ ಬೇರೆ ಯೋಜನೆಗಳ ಅಡಿಯಲ್ಲಿ ಸೌಲಭ್ಯ ಪಡೆದುಕೊಳ್ಳುವ ಸಾಧ್ಯತೆಯಿರುವ ಕಾರಣ ನಕಲು (ಡೂಪ್ಲಿಕೇಷನ್) ಹಾಗೂ ಯೋಜನೆಗಳ ದುರುಪಯೋಗಕ್ಕೆ ಅವಕಾಶವಾಗುತ್ತಿತ್ತು. ಈ ಎಲ್ಲ ದುರುಪಯೋಗಗಳನ್ನು ತಪ್ಪಿಸುವ ಉದ್ದೇಶದಿಂದ ಒಂದೇ ಯೋಜನೆಯ ಅಡಿಯಲ್ಲಿ ಕರ್ನಾಟಕದ ಎಲ್ಲ ನಿವಾಸಿಗಳಿಗೆ ಚಿಕಿತ್ಸೆ ಒದಗಿಸಲು 'ಆರೋಗ್ಯ ಕರ್ನಾಟಕ' ಯೋಜನೆಯನ್ನು ಜಾರಿಗೆ ತರಲಾಗಿದೆ.

**ಪರಿಣಾಮಕಾರಿ ಅನುಷ್ಠಾನಕ್ಕೆ ಒತ್ತು.**

- ಕರ್ನಾಟಕ ರಾಜ್ಯದ 1.34 ಕೋಟಿ ಕುಟುಂಬಗಳು 'ಆರೋಗ್ಯ ಕರ್ನಾಟಕ' ಯೋಜನೆಯ ಫಲಾನುಭವಿಗಳಾಗಿರುತ್ತಾರೆ. ಸಮಗ್ರ ವ್ಯಾಪ್ತಿಯುಳ್ಳ ಈ ಯೋಜನೆಯನ್ನು ಕ್ರಮಬದ್ಧವಾಗಿ ಜಾರಿಗೊಳಿಸಲು ಉದ್ದೇಶಿಸಲಾಗಿದೆ.
- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ರೋಗಿಗಳನ್ನು ನೋಂದಣಿ ಮಾಡಲಾಗುತ್ತದೆ.
- ಮೊದಲ ಹಂತದಲ್ಲಿ 11 ಪ್ರಮುಖ ಸಾರ್ವಜನಿಕ ಆಸ್ಪತ್ರೆಗಳಲ್ಲಿ ರೋಗಿಗಳ ನೋಂದಣಿ ಮಾಡಿ ಆರೋಗ್ಯ ಕಾರ್ಡ್ ವಿತರಣೆ ಮಾಡಲಾಗುತ್ತಿದೆ. ಮೊದಲ ಹಂತದ ಆಸ್ಪತ್ರೆಗಳಲ್ಲಿ ಈವರೆಗೆ 4.25 ಲಕ್ಷ ಆರೋಗ್ಯ ಕಾರ್ಡುಗಳನ್ನು ವಿತರಿಸಲಾಗಿದೆ.
- ಜಿಲ್ಲಾ ಆಸ್ಪತ್ರೆಗಳು, ತಾಲೂಕು ಆಸ್ಪತ್ರೆಗಳು ಮತ್ತು ಸಮುದಾಯ ಆರೋಗ್ಯ ಕೇಂದ್ರಗಳಲ್ಲಿ ರೋಗಿಗಳ ನೋಂದಣಿಯನ್ನು ಹಂತ-ಹಂತವಾಗಿ ಜಾರಿಗೊಳಿಸಲಾಗುತ್ತದೆ.
- ಈ ಮಧ್ಯಂತರ ಅವಧಿಯಲ್ಲಿ ರೋಗಿಗಳ ಚಿಕಿತ್ಸೆಗೆ ಯಾವುದೇ ತೊಂದರೆಯಾಗದಂತೆ ಕ್ರಮವಹಿಸಲಾಗಿದ್ದು, ರೋಗಿಯ ಪಡಿತರ ಚೀಟಿ ಹಾಗೂ ಆಧಾರ್ ಕಾರ್ಡುಗಳ ಆಧಾರದ ಮೇಲೆ ಚಿಕಿತ್ಸೆ ಒದಗಿಸಲಾಗುತ್ತಿದೆ.

**ಸುಲಭವಾದ ರೆಫರಲ್ ವಿಧಾನ**

- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಪ್ರಾಥಮಿಕ ಆರೋಗ್ಯ ಆರೈಕೆ ಮತ್ತು ಸರಳ ದ್ವಿತೀಯ ಆರೋಗ್ಯ ಆರೈಕೆ ಸೇವೆಗಳನ್ನು ಸಾರ್ವಜನಿಕ ಆಸ್ಪತ್ರೆಗಳಲ್ಲಿ ಮಾತ್ರ ಪಡೆದುಕೊಳ್ಳಲು ಅವಕಾಶವಿದೆ.
- ನಿರ್ಧಿಷ್ಟ ದ್ವಿತೀಯ ಹಂತದ ಕ್ಲಿಷ್ಟಕರ ಚಿಕಿತ್ಸೆಗಳು ಮತ್ತು ತೃತೀಯ ಹಂತದ ಚಿಕಿತ್ಸೆಗಳನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ನೀಡಲಾಗುತ್ತದೆ. ಒಂದೊಮ್ಮೆ ಸರ್ಕಾರಿ ಆಸ್ಪತ್ರೆಯಲ್ಲಿ ವೈದ್ಯಕೀಯ ಸಾಮರ್ಥ್ಯ ಇಲ್ಲದಿದ್ದ ಪಕ್ಷದಲ್ಲಿ ಅಗತ್ಯ ಚಿಕಿತ್ಸೆಗಾಗಿ ರೋಗಿಗಳನ್ನು ನೋಂದಾಯಿತ ಖಾಸಗಿ ಆಸ್ಪತ್ರೆಗಳಿಗೆ ರೆಫರಲ್ ಮಾಡಲಾಗುತ್ತದೆ.
- ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ ನೇರವಾಗಿ ನೊಂದಾಯಿತ ಖಾಸಗಿ ಆಸ್ಪತ್ರೆ ಅಥವಾ ಸಾರ್ವಜನಿಕ ಆರೋಗ್ಯ ಸಂಸ್ಥೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳಬಹುದಾಗಿದೆ.
- ಸಾರ್ವಜನಿಕ ಆರೋಗ್ಯ ಸಂಸ್ಥೆಯು ರೋಗಿಗಳನ್ನು ರೆಫರಲ್ ಮಾಡುವಾಗ ಯಾವುದೇ ನಿರ್ಧಿಷ್ಟ ಆಸ್ಪತ್ರೆಗೆ ಹೋಗುವಂತೆ ಶಿಪಾರಸ್ಸು ಮಾಡುವುದಿಲ್ಲ. ರೋಗಿಯು ತಾನು ಬಯಸುವ ಯಾವುದೇ ನೋಂದಾಯಿತ ಖಾಸಗಿ ಆಸ್ಪತ್ರೆಗೆ ಹೋಗಿ ಚಿಕಿತ್ಸೆ ಪಡೆದುಕೊಳ್ಳಬಹುದಾಗಿದೆ.

**ಇತರ ಯೋಜನೆಗಳಿಗೆ ಹೋಲಿಸಿದರೆ 'ಆರೋಗ್ಯ ಕರ್ನಾಟಕ' ಉತ್ತಮ**

- ಯಶಸ್ವಿನಿ ಯೋಜನೆಯಲ್ಲಿ ವಾರ್ಷಿಕ ವಂತಿಗೆ ಪಾವತಿಸಬೇಕಾಗಿತ್ತು ಮತ್ತು ಇದು ಕೇವಲ ಸಹಕಾರಿ ಸಂಘಗಳ ಸದಸ್ಯರಿಗೆ ಮಾತ್ರ ಸೀಮಿತವಾಗಿತ್ತು. ಆದರೆ ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ಯಾವುದೇ ವಂತಿಗೆ ಪಾವತಿಸಬೇಕಾಗಿಲ್ಲ. ಈ ಯೋಜನೆ ರಾಜ್ಯದ ಎಲ್ಲ ನಿವಾಸಿಗಳಿಗೂ ಲಭ್ಯವಿದೆ.
- ಯಶಸ್ವಿನಿ' ಯೋಜನೆಯಡಿಯಲ್ಲಿ ದ್ವಿತೀಯ ಹಾಗೂ ತೃತೀಯ ಹಂತದ 823 ಚಿಕಿತ್ಸೆಗಳನ್ನು ಮಾತ್ರ ಒದಗಿಸುತ್ತಿತ್ತು. ಇದರಲ್ಲಿ 50 ಚಿಕಿತ್ಸೆಗಳು ಮಾತ್ರ ತೃತೀಯ ಹಂತದ ಚಿಕಿತ್ಸೆಗಳಾಗಿದ್ದವು. 'ಆರೋಗ್ಯ ಕರ್ನಾಟಕ' ಯೋಜನೆಯಲ್ಲಿ ಪ್ರಾಥಮಿಕ, ಸರಳ ದ್ವಿತೀಯ, ಕ್ಲಿಷ್ಟಕರ ದ್ವಿತೀಯ, ತೃತೀಯ ಮತ್ತು ತುರ್ತು ಚಿಕಿತ್ಸೆಗಳು ಸೇರಿದಂತೆ ಒಟ್ಟು 1530 ಚಿಕಿತ್ಸೆಗಳನ್ನು ಒದಗಿಸಲಾಗುತ್ತಿದೆ.
- 'ಆರೋಗ್ಯ ಕರ್ನಾಟಕ' ಯೋಜನೆಯಲ್ಲಿ ವೈದ್ಯರ ಸಮಾಲೋಚನಾ ಶುಲ್ಕ ಇರುವುದಿಲ್ಲ. ಶಸ್ತ್ರಚಿಕಿತ್ಸೆಯ ಪೂರ್ವ ಅಥವಾ ನಂತರದ ಸ್ಥಿರೀಕರಣ ವೈದ್ಯಕೀಯ ಆರೈಕೆ ಇರುತ್ತದೆ ಹಾಗೂ ಅನುಸರಣೆ ಚಿಕಿತ್ಸೆ ಮತ್ತು ವೈದ್ಯಕೀಯ ನಿರ್ವಹಣೆ (Medical management) ಸಹ ಇರುತ್ತದೆ.
- ವಾಜಪೇಯಿ ಆರೋಗ್ಯ ಶ್ರೀ ಯೋಜನೆಯ ಅಡಿಯಲ್ಲಿ ಬಿಪಿಎಲ್ ಕುಟುಂಬಗಳಿಗೆ ಮಾತ್ರ ತೃತೀಯ ಹಂತದ ಚಿಕಿತ್ಸೆಗಳನ್ನು ಮಾತ್ರ ನೀಡಲಾಗುತ್ತಿತ್ತು. ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ರಾಜ್ಯದ ಎಲ್ಲ ನಾಗರೀಕರಿಗೆ ಪ್ರಾಥಮಿಕ ಹಂತದ ಚಿಕಿತ್ಸೆಗಳು, ಸರಳ ದ್ವಿತೀಯ ಹಂತದ ಚಿಕಿತ್ಸೆಗಳು, ಕ್ಲಿಷ್ಟಕರ ದ್ವಿತೀಯ ಹಂತದ ಚಿಕಿತ್ಸೆಗಳು, ತೃತೀಯ ಹಂತದ ಚಿಕಿತ್ಸೆಗಳು ಮತ್ತು ತುರ್ತು ಚಿಕಿತ್ಸೆಗಳನ್ನು ಒದಗಿಸಲಾಗುತ್ತಿದೆ.
- ವಾಜಪೇಯಿ ಆರೋಗ್ಯಶ್ರೀ ಯೋಜನೆಯಡಿಯಲ್ಲಿ ತೃತೀಯ ಹಂತದ 663 ಚಿಕಿತ್ಸೆಗಳನ್ನು ಮಾತ್ರ ಒದಗಿಸುತ್ತಿತ್ತು. 'ಆರೋಗ್ಯ ಕರ್ನಾಟಕ' ಯೋಜನೆಯಲ್ಲಿ ಪ್ರಾಥಮಿಕ, ಸರಳ ದ್ವಿತೀಯ, ಕ್ಲಿಷ್ಟಕರ ದ್ವಿತೀಯ, ತೃತೀಯ ಮತ್ತು ತುರ್ತು ಚಿಕಿತ್ಸೆಗಳು ಸೇರಿದಂತೆ ಒಟ್ಟು 1530 ಚಿಕಿತ್ಸೆಗಳನ್ನು ಒದಗಿಸಲಾಗುತ್ತಿದೆ.
- ಈ ಹಿಂದೆ ಜಾರಿಯಲ್ಲಿದ್ದ ಮುಖ್ಯಮಂತ್ರಿ ಸಾಂತ್ವನ ಹರೀಶ್ ಯೋಜನೆಯ ಅಡಿಯಲ್ಲಿ ಅಪಘಾತದ ಗಾಯಾಳುಗಳಿಗೆ ಮೊದಲ 48 ಗಂಟೆಗಳ ಅವಧಿಯ ತುರ್ತು ಚಿಕಿತ್ಸೆಯನ್ನು ಮಾತ್ರ ಒದಗಿಸಲಾಗುತ್ತಿತ್ತು.

ಈಗ ಆರೋಗ್ಯ ಕರ್ನಾಟಕ ಯೋಜನೆಯಡಿಯಲ್ಲಿ ಮೊದಲ 48 ಗಂಟೆಗಳ ತುರ್ತು ಚಿಕಿತ್ಸೆಯೂ ಸೇರಿದಂತೆ ರೋಗಿಗೆ ಪೂರ್ಣಪ್ರಮಾಣದ ಚಿಕಿತ್ಸೆಯನ್ನು ಒದಗಿಸಲಾಗುತ್ತದೆ.

- ಮೇಲಿನ ಅಂಶಗಳನ್ನು ಗಮನಿಸಿದಾಗ ಇತರ ಯೋಜನೆಗಳಿಗಿಂತ ಆರೋಗ್ಯ ಕರ್ನಾಟಕ ಯೋಜನೆ ವಿಶಾಲ ವ್ಯಾಪ್ತಿಯನ್ನು ಹೊಂದಿದ್ದು ಹೆಚ್ಚು ಉಪಯುಕ್ತವಾಗಿರುತ್ತದೆ.
- ಯಾವುದೇ ಯೋಜನೆಗಳನ್ನು ಜಾರಿಗೊಳಿಸುವಾಗ ಕಂಡುಬರುವ ಅನುಭವಗಳು ಹಾಗೂ ಕಲಿಕೆಗಳನ್ನು ಆಧರಿಸಿ ಯೋಜನೆಯಲ್ಲಿ ಸುಧಾರಣೆ ತರುವಂತಹ ಪ್ರಯತ್ನಗಳನ್ನು ಮಾಡಲಾಗುತ್ತದೆ. ಈ ಮಾದರಿಯನ್ನು ಅನುಸರಿಸಿ ರಾಜ್ಯದ ಎಲ್ಲ ಜನರಿಗೆ ಸಾರ್ವತ್ರಿಕ ಆರೋಗ್ಯ ರಕ್ಷಣೆ ಒದಗಿಸಲು ಆರೋಗ್ಯ ಕರ್ನಾಟಕ ಯೋಜನೆಯನ್ನು ಜಾರಿಗೊಳಿಸಲಾಗಿದೆ.

**ಆರೋಗ್ಯ ಕರ್ನಾಟಕ ಯೋಜನೆಯ ಪ್ರಗತಿ**

- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಜೂನ್ –2018 ರಿಂದ ಇಲ್ಲಿಯವರೆಗೆ ಪ್ರಾಥಮಿಕ ಆರೋಗ್ಯ ಸೇವೆಯನ್ನು ಲಕ್ಷಾಂತರ ಜನರು ಪಡೆದುಕೊಂಡಿರುತ್ತಾರೆ ಹಾಗೂ ಸಾಮಾನ್ಯ ದ್ವಿತೀಯ ಆರೋಗ್ಯ ಸೇವೆಗಳ ಪೈಕಿ ಒಳರೋಗಿಗಳಾಗಿ 15,24,880 ರೋಗಿಗಳು ಹಾಗೂ 1,10,880 ಪ್ರಧಾನ ಚಿಕಿತ್ಸೆಗಳು ಹಾಗೂ 1,46,811 ಕಿರಿಯ ಚಿಕಿತ್ಸೆಗಳನ್ನು ಸಾರ್ವಜನಿಕ ಆರೋಗ್ಯ ಸಂಸ್ಥೆಗಳಲ್ಲಿ ನೀಡಲಾಗಿರುತ್ತದೆ.
- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಕ್ಲಿಷ್ಟಕರ ದ್ವಿತೀಯ ಹಾಗೂ ತೃತೀಯ ಚಿಕಿತ್ಸೆಗಳೂ ಸೇರಿದಂತೆ ಇಲ್ಲಿಯವರೆಗೆ 40,969 ರೋಗಿಗಳಿಗೆ ರೆಫರಲ್ ಮೂಲಕ ಚಿಕಿತ್ಸೆ ನೀಡಲಾಗಿದೆ. ತುರ್ತು ಚಿಕಿತ್ಸೆಗಳಿಗೆ ಯಾವುದೇ ರೆಫರಲ್ ಇಲ್ಲದೆ 5,760 ರೋಗಿಗಳಿಗೆ ಚಿಕಿತ್ಸೆ ನೀಡಲಾಗಿರುತ್ತದೆ.
- ಆರೋಗ್ಯ ಕರ್ನಾಟಕ ಯೋಜನೆಯ ಅಡಿಯಲ್ಲಿ ಭಾಗವಹಿಸಲು ಹೆಚ್ಚಿನ ಖಾಸಗಿ ಆಸ್ಪತ್ರೆಗಳು ಅಸಕ್ತಿಯನ್ನು ವ್ಯಕ್ತಪಡಿಸಿರುತ್ತವೆ. ಈಗಾಗಲೇ 528 ಖಾಸಗಿ ಅಸ್ಪತ್ರೆಗಳು ಮತ್ತು 384 ಸಾರ್ವಜನಿಕ ಆಸ್ಪತ್ರೆಗಳು ಸೇರಿ ಒಟ್ಟು 912 ಆಸ್ಪತ್ರೆಗಳು ಆರೋಗ್ಯ ಕರ್ನಾಟಕ ಯೋಜನೆಯಲ್ಲಿ ನೋಂದಾವಣೆಗೊಂಡಿದ್ದು, ಯೋಜನೆಯ ಫಲಾನುಭವಿಗಳಿಗೆ ಚಿಕಿತ್ಸೆ ಒದಗಿಸುತ್ತಿವೆ.

* * *